# ಮಂಗಳೂರು ವಿಶ್ವವಿದ್ಯಾನಿಲಯ

Accredited by NAAC with 'A' Grade

ಸಂಖ್ಯೆ: ಮಂವಿ/ಪವಿ/ಸಿಆರ್.2/2017-18/ಇ.12

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 23.08.2017

## ಪ್ರಕಟಣೆ

2017ರ ಅಕ್ಟೋಬರ್ ತಿಂಗಳಲ್ಲಿ ನಡೆಯಲಿರುವ ಬಿ.ಎಸ್ಸಿ ಫ್ಯಾಷನ್/ಗಾರ್ಮೆಂಟ್ ಡಿಸೈನ್ ಮತ್ತು ಬಿ.ಎಸ್ಸಿ. ಇಂಟೀರಿಯರ್ ಡಿಸೈನ್ & ಡೆಕೊರೇಶನ್ ಪದವಿಯ ಕ್ರೆಡಿಟ್ ಆಧಾರಿತ ಪ್ರಥಮ, ತೃತೀಯ ಹಾಗೂ ಐದನೇ ಸೆಮಿಸ್ಟರ್‌ಗಳ ನಿಯಮಿತ/ ಪುನರಾವರ್ತಿತ ಹಾಗೂ ಇತರ ಸೆಮಿಸ್ಟರ್ ಪದ್ಧತಿಯ ಎಲ್ಲಾ ಸೆಮಿಸ್ಟರ್‌ಗಳ ಪುನರಾವರ್ತಿತ ವಿದ್ಯಾರ್ಥಿಗಳಿಗೆ ಲಿಖಿತ ಪರೀಕ್ಷೆಗಳು ದಿನಾಂಕ **23.10.2017**ರಂದು ಪ್ರಾರಂಭವಾಗಲಿರುವುದು ಎಂಬುದನ್ನು ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಮತ್ತು ಸದರಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

1. **ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗಲಿರುವ ಅಭ್ಯರ್ಥಿಗಳು ಎಲ್ಲಾ ವಿಷಯಗಳಿಗೆ ಮತ್ತು ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು.** 2006ರ ನಂತರದ ಸಾಲಿನ ಕ್ರೆಡಿಟ್ ಆಧಾರಿತ ಸೆಮಿಸ್ಟರ್ ಪದ್ಧತಿಯ ಹಾಗೂ ಇತರ ಸೆಮಿಸ್ಟರ್ ಪದ್ಧತಿಯ ನಿಯಮಿತ ಹಾಗೂ ಪುನರಾವರ್ತಿತ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವುದು. **ಕ್ರೆಡಿಟ್ ಆಧಾರಿತ ಸೆಮಿಸ್ಟರ್ ಸ್ಕೀಂನ ವಿದ್ಯಾರ್ಥಿಗಳು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ಕಡ್ಡಾಯ ವಿಷಯ (ಫೌಂಡೇಶನ್ ಕೋರ್ಸ್) ಹಾಗೂ ಪಠ್ಯೇತರ ವಿಷಯ (ಇ.ಸಿ./ಸಿ.ಸಿ.)ಗಳನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.**
2. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.
3. ಸಂಬಂಧಪಟ್ಟ ವಿಷಯಗಳ ಪ್ರಾಯೋಗಿಕ ಪರೀಕ್ಷೆಗಳು ಲಿಖಿತ ಪರೀಕ್ಷೆಗಳ ಮುಂಚಿತವಾಗಿ ನಡೆಯಲಿರುವುದು.
4. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 110.00 (ರೂಪಾಯಿ ನೂರ ಹತ್ತು ಮಾತ್ರ)ನ್ನು ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು. ***ಕಾಲೇಜುಗಳು ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿ ಸಲ್ಲಿಸುವಾಗ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿಯಲ್ಲಿರುವ ವಿಷಯ ಹಾಗೂ ಕೋಡ್ ಸಂಖ್ಯೆಯನ್ನು ಎಚ್ಚರಿಕೆಯಿಂದ ನಮೂದಿಸತಕ್ಕದ್ದು. ಈ ಬಗ್ಗೆ ಪ್ರಾಂಶುಪಾಲರು ಹೆಚ್ಚಿನ ಜಾಗರೂಕತೆ ವಹಿಸತಕ್ಕದ್ದು.***
5. ***ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತ್ತು ಕಡಿಮೆ ಹಾಜರಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*** **ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.**
6. ವಿದ್ಯಾರ್ಥಿಗಳಿಗೆ ತಮಗೆ ಇಚ್ಛೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆರಿಸಲು ಅವಕಾಶವಿರುವುದಿಲ್ಲ.
7. ***ವಿಶ್ವವಿದ್ಯಾನಿಲಯದ ವಿನಿಯಮ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ. ಕುಲಸಚಿವರ ಅಧಿಸೂಚನೆ ದಿನಾಂಕ 24.04.2008 ರಂತೆ 2011 ಹಾಗೂ ಅದರ ಹಿಂದಿನ ಸಾಲಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯ ನಿಗದಿಪಡಿಸಿದ ವಿಶೇಷ ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗಿರುತ್ತಾರೆ. ಸದ್ರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು. ವಿಶ್ವವಿದ್ಯಾನಿಲಯದ ಪರೀಕ್ಷಾ ನಿಯಮಾವಳಿಗಳಿಗೆ ವಿರುದ್ಧವಾಗಿ ಅನರ್ಹ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಿದ್ದಲ್ಲಿ ಸಂಬಂಧಿತ ಕಾಲೇಜಿನ ಪ್ರಾಂಶುಪಾಲರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.***
8. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.
9. ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.

10. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ವಿವಿಧ ದರಗಳಲ್ಲಿ ದಂಡಶುಲ್ಕ ಸಹಿತ) ಕಾಲೇಜಿನ ಮುಖ್ಯಸ್ಥರಲ್ಲಿ ಪಾವತಿ ಮಾಡಲು ಮತ್ತು ಅಭ್ಯರ್ಥನ ಪತ್ರಗಳನ್ನು ಸಲ್ಲಿಸಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

<u>ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:</u>

| | | |
|---|---|---|
| ದಂಡಶುಲ್ಕ ರಹಿತ | . . . | 15.09.2017 |
| ದಂಡಶುಲ್ಕ ದಿನವೊಂದಕ್ಕೆ ರೂ. 50/- ರಂತೆ | . . . | 16.09.2017 ರಿಂದ 21.09.2017ರವರೆಗೆ |
| ದಂಡಶುಲ್ಕ ದಿನವೊಂದಕ್ಕೆ ರೂ. 100/- ರಂತೆ | . . . | 22.09.2017 ರಿಂದ 26.09.2017ರವರೆಗೆ |

11. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

12. ***ಏಪ್ರಿಲ್ 2017ರ ಪರೀಕ್ಷೆಗಳ ಫಲಿತಾಂಶ ಪ್ರಕಟವಾಗದ ವಿದ್ಯಾರ್ಥಿಗಳು ಮತ್ತು ಮರು ಮೌಲ್ಯಮಾಪನ ಮತ್ತು ಮರು ಸಂಕಲನಕ್ಕೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮತ್ತು ಫಲಿತಾಂಶ ಪ್ರಕಟವಾಗಲು ಬಾಕಿ ಇರುವ ವಿದ್ಯಾರ್ಥಿಗಳು ಸಹ ಪರೀಕ್ಷೆಗೆ ನಿಗದಿಪಡಿಸಿದ ದಿನಾಂಕದೊಳಗಾಗಿ ಪರೀಕ್ಷಾ ಶುಲ್ಕದೊಂದಿಗೆ ಅಭ್ಯರ್ಥನ ಪತ್ರವನ್ನು ಸಲ್ಲಿಸತಕ್ಕದ್ದು. ಯಾವುದೇ ಕಾರಣಕ್ಕೂ ಅಂತಹ ಅಭ್ಯರ್ಥಿಗಳಿಗೆ ಪಾವತಿ ದಿನಾಂಕವನ್ನು ಮುಂದೂಡಲಾಗುವುದಿಲ್ಲ. ಪರೀಕ್ಷಾ ಅವ್ಯವಹಾರಗಳಲ್ಲಿ ಭಾಗಿಯಾಗಿ, ವಿಶ್ವವಿದ್ಯಾನಿಲಯದ ನಿರ್ಣಯ ಬಾಕಿ ಇರುವಂತಹ ಅಭ್ಯರ್ಥಿಗಳು ಸಹ ನಿಗದಿತ ಸಮಯದೊಳಗೆ ಶುಲ್ಕವನ್ನು ಪಾವತಿಸಬೇಕು ಮತ್ತು ಅಭ್ಯರ್ಥನ ಪತ್ರವನ್ನು ಸಲ್ಲಿಸಬೇಕು.***

13. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ಕಾಲೇಜು ಆಫೀಸಿನಲ್ಲಿ ಪಾವತಿಸಬೇಕು ಮತ್ತು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. ***ಶುಲ್ಕವನ್ನು ಪಾವತಿಸಿದ ಬಗ್ಗೆ ಪಡೆದ ರಶೀದಿಯನ್ನು ಪ್ರತ್ಯೇಕವಾಗಿ ಕಳುಹಿಸಿಕೊಡಬೇಕು*** ಹಾಗೂ ಮೊಬಲಗು, ದಿನಾಂಕ ಮತ್ತು ರಶೀದಿ ಸಂಖ್ಯೆಗಳನ್ನು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿವರವಾಗಿ ನಮೂದಿಸಬೇಕು.

14. **ಪರೀಕ್ಷಾ ಶುಲ್ಕದ ದರ ಬಿ.ಎಸ್ಸಿ ಫ್ಯಾಷನ್/ಗಾರ್ಮೆಂಟ್ ಡಿಸೈನ್ ಮತ್ತು ಬಿ.ಎಸ್ಸಿ. ಇಂಟೀರಿಯರ್ ಡಿಸೈನ್ & ಡೆಕೊರೇಶನ್:**

| | | |
|---|---|---|
| ಪ್ರತಿ ಸೆಮಿಸ್ಟರಿನ ಪೂರ್ಣ ಪರೀಕ್ಷೆಗೆ | . . . | ರೂ. 1110.00 |
| ವಿಷಯವೊಂದಕ್ಕೆ | . . . | ರೂ. 385.00 |

15. ಮೇಲೆ ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ಆನ್‌ಲೈನ್ ಎಪ್ಲಿಕೇಷನ್ ಪ್ರೊಸೆಸಿಂಗ್ ಶುಲ್ಕ ರೂ.110.00 ಮತ್ತು ರೂ. 210.00 ಅಂಕಪಟ್ಟಿ ಶುಲ್ಕಗಳನ್ನು ಪಾವತಿಸತಕ್ಕದ್ದು.

16. ವಿದ್ಯಾರ್ಥಿಗಳು ಪರೀಕ್ಷೆಯ ಯಾವುದಾದರೂ ಭಾಗ/ಭಾಗಗಳಿಗೆ ಪಾವತಿಸಲಿರುವ ಒಟ್ಟು ಪರೀಕ್ಷಾ ಶುಲ್ಕವು ನಿಗದಿತ ಪೂರ್ಣ ಪರೀಕ್ಷಾ ಶುಲ್ಕವನ್ನು ಮೀರಬಾರದು.

17. ವಿದೇಶಿ ಅಭ್ಯರ್ಥಿಗಳು ನಿಗದಿಪಡಿಸಿದ ಎಲ್ಲಾ ಶುಲ್ಕಗಳ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.

18. ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ.

ಆ) ಪ್ರ. ವರ್ಗ-1 (ಆದಾಯ ಮಿತಿ ರೂ. 2,50,000/- ಮೀರದ)ಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ.

ಇ) ಕುಟುಂಬದ ವಾರ್ಷಿಕ ವರಮಾನ ರೂ.1,00,000/- ಆದಾಯ ಮಿತಿಯೊಳಗಿರುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ.

ಈ) ಪುನರಾವರ್ತಿತ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ ಎಲ್ಲಾ ಅಭ್ಯರ್ಥಿಗಳು ಪರೀಕ್ಷಾ ವಿನಾಯಿತಿ ಪಡೆಯುವ ಅಭ್ಯರ್ಥಿಗಳು ಸೇರಿದಂತೆ ರೂ. 210/- ಅಂಕಪಟ್ಟಿ ಶುಲ್ಕ ಮತ್ತು ರೂ. 110/- ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.

19. ವಿದ್ಯಾರ್ಥಿಗಳಿಂದ ಪಡೆದ ಒಟ್ಟು ಶುಲ್ಕವನ್ನು ಈ ಕೆಳಗಿನ ಕೋಡ್ ಸಂಖ್ಯೆಗಳಲ್ಲಿ ಬ್ಯಾಂಕ್ ಚಲನ್ ಮುಖಾಂತರ ಮಂಗಳೂರು ವಿಶ್ವವಿದ್ಯಾನಿಲಯದ ನಿಧಿಗೆ ಪಾವತಿಸತಕ್ಕದ್ದು.

ಅ) ಅರ್ಜಿ ಶುಲ್ಕ ........ 008/14

ಆ) ಪರೀಕ್ಷಾ ಶುಲ್ಕ ........ 008/23

ಇ) ಅಂಕಪಟ್ಟಿ ಶುಲ್ಕ ........ 008/24

20. ***ಆಂತರಿಕ ಮೌಲ್ಯಮಾಪನದ ಅಂಕಗಳ ವಿವರಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿ, ಅಂತಿಮ ದೃಢೀಕೃತ ಪ್ರತಿಯನ್ನು (ದ್ವಿಪ್ರತಿಯಲ್ಲಿ) ಪರೀಕ್ಷೆ ಪ್ರಾರಂಭವಾಗುವುದಕ್ಕೆ 15 ದಿನಗಳಿಗೆ ಮುಂಚಿತವಾಗಿ ತಪ್ಪದೆ ಸಲ್ಲಿಸಲು ತಿಳಿಸಲಾಗಿದೆ***

21. ಈ ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ತಪ್ಪದೇ ಈ ಕಛೇರಿಗೆ ದಿನಾಂಕ: ***28.09.2017ರ*** ಒಳಗಾಗಿ ಕಳುಹಿಸಿಕೊಡುವುದು.

ಅ) ಅಭ್ಯರ್ಥನ ಪಟ್ಟಿ ದ್ವಿಪ್ರತಿಗಳಲ್ಲಿ.

ಆ) 2006 ಹಾಗೂ ಅದರ ಹಿಂದಿನ ಸಾಲಿನ ಪುನರಾವರ್ತಿತ ವಿದ್ಯಾರ್ಥಿಗಳ ಅಭ್ಯರ್ಥನ ಪಟ್ಟಿಯನ್ನು Manual ಆಗಿ ಪ್ರತ್ಯೇಕವಾಗಿ ಸಲ್ಲಿಸುವುದು (ದ್ವಿಪ್ರತಿಗಳಲ್ಲಿ).

ಇ) ಕ್ರೋಢೀಕೃತ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಒಂದು ಚಲನ್.

ಈ) ಹಣಕಾಸು ತ:ಖ್ತೆ

ಉ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾದ ಶುಲ್ಕ ವಿನಾಯಿತಿ ತ:ಖ್ತೆಗಳು (**ಮೂರು ಪ್ರತಿಗಳಲ್ಲಿ**). ಅಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ತಪ್ಪದೆ ಕಳುಹಿಸಿಕೊಡಬೇಕು. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಕಾಲೇಜುಗಳ ಪ್ರಾಂಶುಪಾಲರು ಸಮಾಜ ಕಲ್ಯಾಣ ಇಲಾಖೆಯಿಂದ ಮರುಭರಣೆ ಪಡೆದು ಹಿಂದಿನ ವರ್ಷಗಳ ಶುಲ್ಕ ಬಾಕಿಯಿದ್ದಲ್ಲಿ ಅದನ್ನು ಸೇರಿಸಿ ವಿಶ್ವವಿದ್ಯಾನಿಲಯ ನಿಧಿಗೆ ಜಮೆ ಮಾಡುವಂತೆ ತಿಳಿಸಲಾಗಿದೆ.

ಊ) ಪ್ರವರ್ಗ-1ಕ್ಕೆ ಸೇರಿದ (ಆದಾಯ ಮಿತಿ ರೂ.2,50,000/- ಮೀರದ) ವಿದ್ಯಾರ್ಥಿಗಳ ಪರೀಕ್ಷಾಶುಲ್ಕ ವಿನಾಯಿತಿ ಬಗ್ಗೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗೆ ಕ್ಲೇಮು ಸಲ್ಲಿಸಿ ಸ್ವೀಕೃತಿ ಪಡೆದ ಶುಲ್ಕ ಮರುಭರಣೆಯ ಬಿಲ್ಲಿನ ಪ್ರತಿಯನ್ನು (ಮೂರು ಪ್ರತಿಗಳು) ಕಳುಹಿಸಿಕೊಡಬೇಕು. ಇಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಕಳುಹಿಸುವುದು.

ಋ) ಹಿಂದುಳಿದ ವರ್ಗಗಳ (ಕುಟುಂಬದ ವಾರ್ಷಿಕ ವರಮಾನ 1,00,000/- ಮೀರದ)ವಿದ್ಯಾರ್ಥಿಗಳ ಶುಲ್ಕ ವಿನಾಯಿತಿ ಬಗ್ಗೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗೆ ಕ್ಲೇಮು ಸಲ್ಲಿಸಿ ಸ್ವೀಕೃತಿ ಪಡೆದ ಶುಲ್ಕ ಮರುಭರಣೆಯ ಬಿಲ್ಲಿನ ಪ್ರತಿಯನ್ನು (ಮೂರು ಪ್ರತಿಗಳು) ಕಳುಹಿಸಿಕೊಡಬೇಕು. ಇಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಕಳುಹಿಸುವುದು.

ೠ) ಪ್ರತೀ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಸೂಚಿಸುವ ತ:ಖ್ತೆ (ಲಗತ್ತಿಸಲಾದ ನಮೂನೆಯಲ್ಲಿ).

ಎ) ಇತರ ಕಾಲೇಜು/ ವಿಶ್ವವಿದ್ಯಾನಿಲಯಗಳಿಂದ ವರ್ಗಾವಣೆ ಪ್ರವೇಶಾತಿ ಹೊಂದಿದ ವಿದ್ಯಾರ್ಥಿಗಳ ಬಗ್ಗೆ ಪ್ರತ್ಯೇಕ ವಿವರ ಸಲ್ಲಿಸುವುದು.

ಏ) ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿಯನ್ನು ಇ-ಮೇಲ್ ಮುಖಾಂತರ ಹಾಗೂ ಮ್ಯಾನ್ಯುವಲ್ ಆಗಿ ತಯಾರಿಸಿ ***ದಿನಾಂಕ 26.09.2017ರೊಳಗೆ*** ಈ ಕಛೇರಿಗೆ ತಪ್ಪದೆ ಸಲ್ಲಿಸುವುದು

**ಕುಲಸಚಿವರು (ಪರೀಕ್ಷಾಂಗ)**

ಅಡಕ: ವಿದ್ಯಾರ್ಥಿಗಳ ಸಂಖ್ಯೆಯನ್ನು ಸೂಚಿಸುವ ತ:ಖ್ತೆ.

**ರಿಗೆ:** ಬಿ.ಎಸ್ಸಿ ಫ್ಯಾಷನ್/ಗಾರ್ಮೆಂಟ್ ಡಿಸೈನ್ ಮತ್ತು ಬಿ.ಎಸ್ಸಿ. ಇಂಟೀರಿಯರ್ ಡಿಸೈನ್ & ಡೆಕೊರೇಶನ್ ಕೋರ್ಸುಗಳನ್ನು ನಡೆಸುವ ಕಾಲೇಜುಗಳ ಪ್ರಾಂಶುಪಾಲರಿಗೆ.

<u>ಪ್ರತಿ:</u>

1. ಕುಲಸಚಿವರು/ ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ವಿಶೇಷಾಧಿಕಾರಿ (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
3. ಸಹಾಯಕ ಕುಲಸಚಿವರು (ಪರೀಕ್ಷಾಂಗ) 1 & 2 , ಮಂಗಳೂರು ವಿಶ್ವವಿದ್ಯಾನಿಲಯ.
4. ಕುಲಪತಿಯವರ ಆಪ್ತ ಕಾರ್ಯದರ್ಶಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
5. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ ಕಾಲೇಜು ಆವರಣ, ಮಂಗಳೂರು.
6. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಜಿಲ್ಲಾಧಿಕಾರಿಯವರ ಕಛೇರಿ ಬಳಿ, ದಕ್ಷಿಣ ಕನ್ನಡ, ಮಂಗಳೂರು.
7. ಅಧೀಕ್ಷಕರು ಎಸ್.1, ಎಸ್.2, ಎಸ್.3, ಎಸ್.4, ಎಸ್.6.
8. ಸಿಸ್ಟಂ ಅನಾಲಿಸ್ಟ್, ಕಂಪ್ಯೂಟರ್ ವಿಭಾಗ, ಕುಲಸಚಿವ (ಪರೀಕ್ಷಾಂಗ)ರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ.
9. ಆಪ್ತ ಸಹಾಯಕರು, ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
10. ಇ.9/ಇ.11/ಇ30 ಕಾರ್ಯ ನಿರ್ವಾಹಕರು.

# MANGALORE UNIVERSITY

## NO. OF CANDIDATES APPEARING (STATISTICS) FOR OCTOBER 2017 B.Sc.(FASHION DESIGN, GARMENT DESIGN, INTERIOR DESIGN & DECORATION) DEGREE EXAMINATIONS

*NAME OF THE COLLEGE:* ..........................................................................

| Semester | Credit based | | Total |
|---|---|---|---|
| | Fresher | Repeater | |
| I Semester | | | |
| III Semester | | | |
| V Semester | | | |
| **Total** | | | |

| Semester | Non Credit based Repeaters | Total |
|---|---|---|
| I Semester | | |
| II Semester | | |
| III Semester | | |
| IV Semester | | |
| V Semester | | |
| VI Semester | | |
| **Total** | | |

Signature
PRINCIPAL.

................................. College